# Akashvani: Bangalore
# Regional Bulletin In Kannada
# 19.12.2025 : 14.30hrs

## ಆಕಾಶವಾಣಿ ಬೆಂಗಳೂರು

## ಪ್ರದೇಶ ಸಮಾಚಾರ

**ಮುಖ್ಯಾಂಶಗಳು :**

1. ಕಲ್ಯಾಣ ಕರ್ನಾಟಕ ತಲಾ ಆದಾಯದಲ್ಲಿ ಹಿಂದುಳಿಯಲು ಹೈನುಗಾರಿಕೆಯ ನಿರಾಸಕ್ತಿಯೇ ಕಾರಣ - ವಿಧಾನಸಭೆಯಲ್ಲಿ ಮುಖ್ಯಮಂತ್ರಿ ವಿಶ್ಲೇಷಣೆ
2. ಮೇಲ್ಮನೆಯಲ್ಲಿ ದ್ವೇಷ ಭಾಷಣ ತಡೆ ವಿಧೇಯಕಕ್ಕೆ ವಿರೋಧ; ಪ್ರತಿಪಕ್ಷಗಳ ಸದಸ್ಯರಿಂದ ಗದ್ದಲ
3. ಕ್ರಿಸ್‌ಮಸ್ ಹಿನ್ನಲೆ; ರಾಜ್ಯ ರಸ್ತೆ ಸಾರಿಗೆ ನಿಗಮದಿಂದ ಒಂದು ಸಾವಿರ ಹೆಚ್ಚುವರಿ ಬಸ್ ವ್ಯವಸ್ಥೆ
4. ಚಿನ್ನಸ್ವಾಮಿ ಕ್ರೀಡಾಂಗಣದಲ್ಲಿ ಪಂದ್ಯ ಆಯೋಜನೆ ವಿಚಾರ; ಪೊಲೀಸರಿಂದ ೧೭ ಅಂಶಗಳ ಮಾರ್ಗಸೂಚಿ ಬಿಡುಗಡೆ
5. ರಾಜ್ಯದಲ್ಲಿ ಮುಂದಿನ ಐದು ದಿನಗಳ ಕಾಲ ಶೀತಗಾಳಿ; ರಾಜ್ಯ ನೈಸರ್ಗಿಕ ವಿಕೋಪ ಉಸ್ತುವಾರಿ ಕೇಂದ್ರ ಸ್ಪಷ್ಟನೆ

**********

ಕಲ್ಯಾಣ ಕರ್ನಾಟಕದ ಆರು ಜಿಲ್ಲೆಗಳಲ್ಲಿ ಹಾಲು ಉತ್ಪಾದನೆ ಕಡಿಮೆ ಇರುವುದು ತಲಾ ಆದಾಯದಲ್ಲಿ ಹಿಂದುಳಿಯಲು ಕಾರಣ ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ಸ್ಪಷ್ಟಪಡಿಸಿದ್ದಾರೆ. ವಿಧಾನಸಭೆಯಲ್ಲಿಂದು ಉತ್ತರ ಕರ್ನಾಟಕದ ಅಭಿವೃದ್ಧಿಯ ಬಗ್ಗೆ ಸುದೀರ್ಘ ಭಾಷಣ ಮಾಡಿದ ಮುಖ್ಯಮಂತ್ರಿ, ತಲಾ ಆದಾಯದಲ್ಲಿ ಕಲಬುರಗಿ ಅತ್ಯಂತ ಹಿಂದುಳಿದಿದೆ. ಬೆಂಗಳೂರು ನಗರ, ದಕ್ಷಿಣ ಕನ್ನಡ, ಉಡುಪಿ, ಚಿಕ್ಕಮಗಳೂರು, ಬೆಂಗಳೂರು ಗ್ರಾಮಾಂತರ, ಶಿವಮೊಗ್ಗ ಜಿಲ್ಲೆಗಳ ಜನರ ತಲಾ ಆದಾಯ ಮೂರು ಲಕ್ಷ ೪೦ ಸಾವಿರ ರೂಪಾಯಿಗಳಿಗಿಂತ ಹೆಚ್ಚಿದೆ ಎಂದು ತಿಳಿಸಿದ್ದಾರೆ. ಕಲ್ಯಾಣ ಕರ್ನಾಟಕದ ಶೈಕ್ಷಣಿಕ ಪ್ರಗತಿಗೆ ಛಾಯಾ ದೇವನ ಗಾಂವ್ಕರ್ ವರದಿಯ ಶಿಫಾರಸ್ಸುಗಳ ಜಾರಿಗೆ ಸರ್ಕಾರ ಬದ್ಧ ಎಂದು ಘೋಷಿಸಿದ್ದಾರೆ. ಕಲ್ಯಾಣ ಕರ್ನಾಟಕದಲ್ಲಿ ಶಿಕ್ಷಣ ಮತ್ತು ಆರೋಗ್ಯಯ ಕ್ಷೇತ್ರಗಳ ಅಭಿವೃದ್ಧಿಗೆ ಹೆಚ್ಚಿನ ಒತ್ತು ನೀಡಲಾಗಿದೆ. ರಾಜ್ಯದಲ್ಲಿ ಪ್ರಸಕ್ತ ಸಾಲಿನಲ್ಲಿ ಸುಮಾರು ೭.೪ ಲಕ್ಷ ಹೆಕ್ಟೇರ್ ಪ್ರದೇಶದಲ್ಲಿ ರೈತರು ಕಬ್ಬು ಬೆಳೆದಿದ್ದಾರೆ. ೫೩.೭೨ ಲಕ್ಷ ಮೆಟ್ರಿಕ್ ಟನ್ ಸಕ್ಕರೆ ಉತ್ಪಾದನೆಯಾಗಬಹುದು ಎಂದು ಅಂದಾಜಿಸಲಾಗಿದೆ ಎಂದು ತಿಳಿಸಿದ್ದಾರೆ.

**********

ಹೈಕಮಾಂಡ್ ಹೇಳಿದರೆ ಮುಂದಿನ ದಿನಗಳಲ್ಲಿ ಮುಖ್ಯಮಂತ್ರಿ ಆಗಿ ಮುಂದುವರೆಯುವುದಾಗಿ ಮುಖ್ಯಮಂತ್ರಿ ಸಿದ್ದರಾಮಯ್ಯ ಸ್ಪಷ್ಟಪಡಿಸಿದ್ದಾರೆ. ವಿಧಾನಸಭೆ ಕಲಾಪದಲ್ಲಿಂದು ಚರ್ಚೆಯಲ್ಲಿ ಭಾಗವಹಿಸಿ ಮಾತನಾಡಿದ ಅವರು, ತಮಗೆ ರಾಜಕೀಯ ನಿಶ್ಶಕ್ತಿ ಎಂಬುದೇ ಇಲ್ಲ ಎಂದು ತಿಳಿಸಿದ್ದಾರೆ. ವಿರೋಧ ಪಕ್ಷಗಳು ಯಾವುದೇ ತಪ್ಪು ತಿಳುವಳಿಕೆಗಳಿಗೆ ಆಸ್ಪದ ನೀಡದಂತೆ ತಿಳಿಸಿದ ಅವರು, ರಾಜಕೀಯವನ್ನು ತಲೆಕೆಡಿಸಿಕೊಂಡು ಮಾಡಬೇಕಾದ ಅಗತ್ಯವಿಲ್ಲ ಎಂದು ಪ್ರತಿಪಾದಿಸಿದ್ದಾರೆ. ಅಧಿಕಾರವನ್ನು ಜನರೇ ನೀಡುತ್ತಿದ್ದು, ಆಶೀರ್ವಾದ ಇದ್ದರೆ ಆಡಳಿತ ಪಕ್ಷ, ಇಲ್ಲವಾದರೆ ವಿರೋಧ ಪಕ್ಷದಲ್ಲಿ ಕೂರಬೇಕಾಗುತ್ತದೆ ಎಂದು ಹೇಳಿದ್ದಾರೆ.

**********

ವಿಧಾನಪರಿಷತ್‌ನ ಚಳಿಗಾಲದ ಅಧಿವೇಶನದ ಕೊನೆಯ ದಿನವಾದ ಇಂದು ಕರ್ನಾಟಕ ದ್ವೇಷ ಭಾಷಣ ಮತ್ತು ದ್ವೇಷ ಅಪರಾಧಗಳ ವಿಧೇಯಕ -೨೦೨೫ಕ್ಕೆ ಅನುಮೋದನೆ ನೀಡುವಂತೆ ಗೃಹ ಸಚಿವ ಡಾ.ಜಿ ಪರಮೇಶ್ವರ್ ಪ್ರಸ್ತಾಪಿಸಿದರು. ಮಸೂದೆಯನ್ನು ಸದನದಲ್ಲಿ ಮಂಡಿಸಿ ಮಾತನಾಡಿದ ಅವರು, ರಾಜ್ಯದಲ್ಲಿ ರಾಜಕೀಯ ಹಾಗೂ ಧಾರ್ಮಿಕ ಭಾಷಣಗಳಿಂದಾಗಿ ಸಮಾಜದ ಸ್ವಾಸ್ಥ್ಯ ಹಾಳಾಗುತ್ತಿದೆ. ಪ್ರಚೋದನಕಾರಿ ಭಾಷಣಗಳಿಂದಾಗಿ ಯುವಜನರು ಹೆಚ್ಚು ಕೋಮುಗಲಭೆಗಳಲ್ಲಿ ತೊಡಗಿಸಿಕೊಳ್ಳುತ್ತಿದ್ದಾರೆ ಎಂದು ಹೇಳಿದರು. ವಿಧೇಯಕಕ್ಕೆ ತೀವ್ರ ಆಕ್ಷೇಪ ವ್ಯಕ್ತಪಡಿಸಿದ ಪ್ರತಿಪಕ್ಷದ ಸದಸ್ಯ ಕೆ.ಎಸ್ ನವೀನ್, ಅಭಿವ್ಯಕ್ತಿ ಸ್ವಾತಂತ್ರ್ಯಕ್ಕೆ ಈ ವಿಧೇಯಕ ವಿರುದ್ಧವಾಗಿದೆ. ವಿರೋಧ ಪಕ್ಷದವರನ್ನು ಕಟ್ಟಿಹಾಕಲು ಈ ವಿಧೇಯಕವನ್ನು ಮಂಡಿಸುತ್ತಿದ್ದಾರೆ ಎಂದು ಆರೋಪಿಸಿದರು. ಮತ್ತೋರ್ವ ಪ್ರತಿಪಕ್ಷದ ಸದಸ್ಯ ಸಿ.ಟಿ ರವಿ ಕೂಡಾ ಈ ಮಸೂದೆಯನ್ನು ತೀವ್ರವಾಗಿ ಖಂಡಿಸಿದರು. ಇದಕ್ಕೂ ಮುನ್ನ ಪರಿಷತ್‌ನಲ್ಲಿ ಕರ್ನಾಟಕ ಖಾಸಗಿ ವೈದ್ಯಕೀಯ ಸಂಸ್ಥೆಗಳ ತಿದ್ದುಪಡಿ ವಿಧೇಯಕ-೨೦೨೫ ಹಾಗೂ ಅನುಸೂಚಿತ ಜಾತಿಗಳು ಮತ್ತು ಅನುಸೂಚಿತ ಬುಡಕಟ್ಟುಗಳ ಆಯೋಗ ವಿಧೇಯಕ ಮಸೂದೆ ೨೦೨೫ಕ್ಕೆ ಸರ್ವಾನುಮತದಿಂದ ಅಂಗೀಕಾರ ದೊರೆಯಿತು.

**********

ಕ್ರಿಸ್‌ಮಸ್ ಹಬ್ಬದ ಪ್ರಯುಕ್ತ ಕರ್ನಾಟಕ ರಾಜ್ಯ ರಸ್ತೆ ಸಾರಿಗೆ ನಿಗಮವು ಸಾರ್ವಜನಿಕ ಪ್ರಯಾಣಿಕರ ಅನುಕೂಲಕ್ಕಾಗಿ ಇಂದು, ನಾಳೆ ಹಾಗೂ ೨೪ರಂದು ಬೆಂಗಳೂರಿನಿಂದ ಒಂದು ಸಾವಿರ ಹೆಚ್ಚುವರಿ ಬಸ್‌ಗಳ ವಿಶೇಷ ಸಾರಿಗೆ ವ್ಯವಸ್ಥೆ ಕಲ್ಪಿಸಿದೆ. ಕೆಂಪೇಗೌಡ ಬಸ್ ನಿಲ್ದಾಣದಿಂದ ಧರ್ಮಸ್ಥಳ, ಕುಕ್ಕೆ ಸುಬ್ರಹ್ಮಣ್ಯ, ಮಂಗಳೂರು, ಶೃಂಗೇರಿ, ತಿರುಪತಿ ಸೇರಿದಂತೆ ಹಲವೆಡೆಗೆ ವಿಶೇಷ ಬಸ್ ಸೌಲಭ್ಯ ಒದಗಿಸಲಾಗಿದೆ. ಪ್ರಯಾಣಿಕರು ಮುಂಗಡವಾಗಿ ಆಸನಗಳನ್ನು ಕಾಯ್ದಿರಿಸಬಹುದು. ನಾಲ್ಕು ಅಥವಾ ಹೆಚ್ಚು ಪ್ರಯಾಣಿಕರು ಒಟ್ಟಾಗಿ ಮುಂಗಡ ಟಿಕೆಟ್ ಕಾಯ್ದಿರಿಸಿದಲ್ಲಿ ಶೇಕಡ ೫ರಷ್ಟು ರಿಯಾಯಿತಿ ದೊರೆಯಲಿದೆ. ತೆರಳುವ ಹಾಗೂ ಆಗಮಿಸುವ ಟಿಕೆಟ್‌ಅನ್ನು ಒಟ್ಟಿಗೆ ಕಾಯ್ದಿರಿಸಿದರೆ ಶೇಕಡ ೧೦ರಷ್ಟು ರಿಯಾಯಿತಿ ದೊರೆಯಲಿದೆ.

**********

ಚಿನ್ನಸ್ವಾಮಿ ಕ್ರೀಡಾಂಗಣಲ್ಲಿ ಐಪಿಎಲ್ ಮತ್ತು ಕ್ರಿಕೆಟ್ ಪಂದ್ಯಗಳ ಆಯೋಜನೆಗೆ ಗೃಹ ಇಲಾಖೆ ಸೂಚನೆ ಮೇರೆಗೆ ಬೆಂಗಳೂರು ಪೊಲೀಸರು ೧೭ ಅಂಶಗಳ ಮಾರ್ಗಸೂಚಿ ಹೊರಡಿಸಿದ್ದಾರೆ. ಪ್ರವೇಶ ದ್ವಾರ ಸುಧಾರಣೆ, ಪಾರ್ಕಿಂಗ್ ವ್ಯವಸ್ಥೆ, ಪ್ರೇಕ್ಷಕರ ಸಾಲುಗಳಿಗೆ ಪ್ರತ್ಯೇಕ ವ್ಯವಸ್ಥೆ ಸೇರಿದಂತೆ ಹಲವು ಬದಲಾವಣೆಗಳನ್ನು ಕಡ್ಡಾಯಗೊಳಿಸಲಾಗಿದೆ. ಅಗ್ನಿಶಾಮಕ ಸುರಕ್ಷತೆಗಾಗಿ ಪ್ರತ್ಯೇಕ ನಿರ್ಗಮನ ದ್ವಾರಗಳನ್ನು ಕಡ್ಡಾಯಗೊಳಿಸಲಾಗಿದೆ. ಮಹಿಳೆಯರು ಮತ್ತು ಮಕ್ಕಳಿಗೆ ಕ್ರೀಡಾಂಗಣದ ಒಳಗೆ ಪ್ರತ್ಯೇಕ ಸೌಲಭ್ಯಗಳನ್ನು ಒದಗಿಸಬೇಕು. ಟಿಕೆಟ್‌ಗಳನ್ನು ಕ್ರೀಡಾಂಗಣದ ಒಳಗೆ ವಿತರಿಸಲು ಸ್ಥಳಗಳನ್ನು ಗೊತ್ತುಪಡಿಸುವುದು ಸೇರಿದಂತೆ ೧೭ ಷರತ್ತುಗಳನ್ನು ವಿಧಿಸಲಾಗಿದೆ.

**********

ರಾಜ್ಯದಲ್ಲಿ ಮುಂದಿನ ಐದು ದಿನಗಳ ಕಾಲ ಶೀತಗಾಳಿ ಮುಂದುವರಿಯಲಿದ್ದು, ಚಳಿ ಹೆಚ್ಚಾಗಲಿದೆ ಎಂದು ರಾಜ್ಯ ನೈಸರ್ಗಿಕ ವಿಕೋಪ ಉಸ್ತುವಾರಿ ಕೇಂದ್ರ ತಿಳಿಸಿದೆ. ಬೀದರ್, ಕಲಬುರಗಿ, ಯಾದಗಿರಿ, ರಾಯಚೂರು ಜಿಲ್ಲೆಗಳಲ್ಲಿ ಶೀತಗಾಳಿ ಹೆಚ್ಚಾಗುವ ಸಾಧ್ಯತೆ ಇದ್ದು, ಹವಾಮಾನ ಇಲಾಖೆ ಈ ಜಿಲ್ಲೆಗಳಲ್ಲಿ ಯಲ್ಲೋ ಅಲರ್ಟ್ ಘೋಷಣೆ ಮಾಡಿದೆ. ಇನ್ನುಳಿದ ಜಿಲ್ಲೆಗಳಲ್ಲಿ ಮಂಜು ಮುಸುಕಿದ ವಾತಾವರಣ ಹಾಗೂ ಸಾಧಾರಣ ಚಳಿ ಇರಲಿದೆ. ನಾಗರಿಕರು ಎಚ್ಚರಿಕೆ ವಹಿಸುವಂತೆ ಹವಾಮಾನ ಇಲಾಖೆ ಸ್ಪಷ್ಟಪಡಿಸಿದೆ. ಬೆಂಗಳೂರು ದಕ್ಷಿಣ, ಬೀದರ್‌ನಲ್ಲಿ ಕನಿಷ್ಠ ೧೦ ಡಿಗ್ರಿ ಸೆಲ್ಸಿಯಸ್ ದಾಖಲಾಗಿದೆ. ಬೆಂಗಳೂರು ನಗರದಲ್ಲಿ ೧೦.೭ ಡಿಗ್ರಿ ಸೆಲ್ಸಿಯಸ್ ದಾಖಲಾದರೆ ದಕ್ಷಿಣ ಕನ್ನಡದಲ್ಲಿ ಕನಿಷ್ಠ ತಾಪಮಾನ ೨೦ ಡಿಗ್ರಿ ಸೆಲ್ಸಿಯಸ್ ದಾಖಲಾಗಿದೆ.

**********

ಜೀವನದಲ್ಲಿ ಉನ್ನತ ಸ್ಥಾನಕ್ಕೇರುವುದು, ಕೈತುಂಬ ವೇತನ ಪಡೆಯುವುದು ನಿಜವಾದ ಯಶಸ್ಸಲ್ಲ. ನಾವು ಇತರರನ್ನು ಸಂತೋಷವಾಗಿರುವಂತೆ ನೋಡಿಕೊಳ್ಳುವುದೇ ನಿಜವಾದ ಯಶಸ್ಸು ಎಂದು ಅಖಿಲ ಭಾರತೀಯ ತಾಂತ್ರಿಕ ಶಿಕ್ಷಣ ಪರಿಷತ್‌ನ ಅಧ್ಯಕ್ಷ ಪ್ರೊಫೆಸರ್ ಟಿ.ಜಿ. ಸೀತಾರಾಮ್ ಅಭಿಪ್ರಾಯಪಟ್ಟಿದ್ದಾರೆ. ವಿಶ್ವೇಶ್ವರಯ್ಯ ತಾಂತ್ರಿಕ ವಿಶ್ವವಿದ್ಯಾಲಯ ಆಯೋಜಿಸಿದ್ದ ಉಪನ್ಯಾಸ ಕಾರ್ಯಕ್ರಮದಲ್ಲಿ ಮಾತನಾಡಿದ ಅವರು, ಪ್ರತಿಯೊಬ್ಬ ಮನುಷ್ಯನಿಗೂ ಮಾನವೀಯ ಮೌಲ್ಯಗಳು ಅತ್ಯಮೂಲ್ಯವಾಗಿದೆ ಎಂದು ತಿಳಿಸಿದ್ದಾರೆ. ತಂತ್ರಜ್ಞಾನ ಹೊರತಾಗಿಯೂ ಇತರೆ ಒಂದು ಲೋಕವಿದೆ ಎಂಬ ಅರಿವು ನಿಮಗಿರಲಿ ಎಂದು ಹೇಳಿದ್ದಾರೆ.

**********

ರಾಷ್ಟ್ರೀಯ ಗೀತೆಯಾದ ವಂದೇ ಮಾತರಂ ಗೆ ಎಲ್ಲರೂ ಗೌರವ ಸಲ್ಲಿಸಬೇಕಾದ ಅಗತ್ಯವಿದೆ ಎಂದು ಮುಳಬಾಗಿಲು ತಾಲ್ಲೂಕು ಪಂಚಾಯತ್ ಕಾರ್ಯನಿರ್ವಾಹಕ ಅಧಿಕಾರಿ ಆರ್.ರವಿಚಂದ್ರ ತಿಳಿಸಿದ್ದಾರೆ. ಕೇಂದ್ರ ಸರ್ಕಾರದ ವಾರ್ತಾ ಮತ್ತು ಪ್ರಸಾರ ಸಚಿವಾಲಯ, ಕೇಂದ್ರ ಸಂವಹನ ಇಲಾಖೆ, ಮೈಸೂರು, ಸಂಯುಕ್ತ ಆಶ್ರಯದಲ್ಲಿ ಮುಳಬಾಗಿಲು ಬಾಲಕಿಯರ ಪದವಿಪೂರ್ವ ಕಾಲೇಜಿನಲ್ಲಿ ಹಮ್ಮಿಕೊಳ್ಳಲಾದ ವಂದೇ ಮಾತರಂ ೧೫೦ನೇ ವರ್ಷಗಳ ಸ್ಮರಣಾರ್ಥ ಹಾಗೂ "ಬಾಲ್ಯ ವಿವಾಹ ಮುಕ್ತ ಭಾರತ" ವಿಶೇಷ ಕಾರ್ಯಕ್ರಮ ಉದ್ಘಾಟನೆ ನೆರವೇರಿಸಿ ಅವರು ಮಾತನಾಡಿದರು. ರಾಷ್ಟ್ರೀಯ ಗೀತೆಗೆ ಗೌರವ ಸಲ್ಲಿಸುವ ವಿಶೇಷ ಕಾರ್ಯಕ್ರಮ ನಡೆಸಿದ ಮೈಸೂರಿನ ಕೇಂದ್ರ ಸಂವಹನ ಇಲಾಖೆಗೆ ಅವರು ಅಭಿನಂದನೆ ಸಲ್ಲಿಸಿದರು. ಇನ್ನೊಂದೆಡೆ ಶಿವಮೊಗ್ಗದಲ್ಲಿಯೂ ವಂದೇ ಮಾತರಂನ ೧೫೦ನೇ ವರ್ಷಾಚರಣೆ ಹಿನ್ನೆಲೆಯಲ್ಲಿ ಸ್ವಚ್ಛತಾ ಚಟುವಟಿಕೆ, ರಂಗೋಲಿ ಸೇರಿದಂತೆ ಇತರೆ ಸ್ಪರ್ಧೆಗಳನ್ನು ಆಯೋಜಿಸಿತ್ತು.

**********

ಭಾರತವು ಪೋಲಿಯೋ ಮುಕ್ತ ರಾಷ್ಟ್ರವಾಗಿ ೧೪ ವರ್ಷ ಕಳೆದಿದೆ. ಇದು ಒಂದು ಮಹತ್ತರ ಸಾಧನೆಯಾಗಿದ್ದರೂ, ಇತ್ತೀಚಿನ ದಿನಗಳಲ್ಲಿ ಭಾರತದ ನೆರೆಯ ರಾಷ್ಟ್ರಗಳಲ್ಲಿ Wild Polio Virus ಸಂಭಾವ್ಯ ಹರಡುವಿಕೆಯು ಇಂದಿಗೂ ಜಗತ್ತಿನಾದ್ಯಂತ ಹಾಗೂ ಭಾರತದ ಮಕ್ಕಳನ್ನು ಅಪಾಯದಂಚಿನಲ್ಲಿರಿಸಿದೆ. ಮುಂಜಾಗ್ರತಾ ದೃಷ್ಠಿಯಿಂದ ದೇಶಾದ್ಯಂತ ಇದೇ ೨೧ ರಿಂದ ೨೪ರ ವರೆಗೆ ಪಲ್ಸ್ ಪೋಲಿಯೋ ಲಸಿಕಾ ಅಭಿಯಾನ ನಡೆಯಲಿದೆ. ಬೆಂಗಳೂರು ಕೇಂದ್ರ ನಗರಪಾಲಿಕೆ ವತಿಯಿಂದ ಇಂದು ಎಂ.ಜಿ ರಸ್ತೆಯಲ್ಲಿರುವ ಗಾಂಧಿ ಉದ್ಯಾನವನದಿಂದ ಮೇಯೋಹಾಲ್ ಕಟ್ಟಡದವರೆಗೆ ಸಾರ್ವಜನಿಕರಲ್ಲಿ ಜಾಗೃತಿ ಮೂಡಿಸಲು ಕಾಲ್ನಡಿಗೆ ಜಾಥಾ ನಡೆಸಲಾಯಿತು. ಜಾಥಾಗೆ ಚಾಲನೆ ನೀಡಿದ ಪಾಲಿಕೆಯ ಅಭಿವೃದ್ಧಿ ಆಯುಕ್ತ ದಲ್ಜಿತ್ ಕುಮಾರ್ ಜೀವದ ರಕ್ಷಾ ಕವಚವಾದ ಎರಡು ಹನಿ ಪಲ್ಸ್ ಪೋಲಿಯೋ ಲಸಿಕೆಯನ್ನು ೫ ವರ್ಷದ ಒಳಗಿನ ಎಲ್ಲಾ ಮಕ್ಕಳಿಗೆ ಹಾಕಿಸುವಂತೆ ಮನವಿ ಮಾಡಿದರು.  ಕೋಲಾರ ಜಿಲ್ಲೆಯ ಮುಳಬಾಗಿಲು ತಾಲೂಕಿನಲ್ಲಿ ಸುಮಾರು ೨೫ ಸಾವಿರದ ೩೮೨ ಮಕ್ಕಳಿಗೆ ಪೊಲಿಯೋ ಲಸಿಕೆ ಹಾಕಿಸುವ ಗುರಿ ಹೊಂದಲಾಗಿದೆ ಎಂದು ತಾಲೂಕು ಆರೋಗ್ಯಾಧಿಕಾರಿ ಡಾ. ಸಿ.ಸುಗುಣ ತಿಳಿಸಿದ್ದಾರೆ.

**********

ಕರಾವಳಿ ಉತ್ಸವದ ಭಾಗವಾಗಿ ಡಾ.ಶಿವರಾಮ ಕಾರಂತ ಪಿಲಿಕುಳ ನಿಸರ್ಗಧಾಮದಲ್ಲಿ ನಾಳೆಯಿಂದ ಜನವರಿ ೪ರ ವರೆಗೆ ಶೇಕಡ ೫೦ರಷ್ಟು ರಿಯಾಯಿತಿ ಒದಗಿಸಲಾಗುತ್ತಿದೆ ಎಂದು ದಕ್ಷಿಣ ಕನ್ನಡ ಜಿಲ್ಲಾಧಿಕಾರಿ ದರ್ಶನ್ ಎಚ್.ವಿ ತಿಳಿಸಿದ್ದಾರೆ.

*****END*****